# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 922 |
| 2. | ಸದಸ್ಯರ ಹೆಸರು | : | ಶ್ರೀ.ಎನ್.ರವಿಕುಮಾರ್ |
| 3. | ಉತ್ತರಿಸಬೇಕಾದ ದಿನಾಂಕ | : | 18.12.2018 |
| 4. | ಉತ್ತರಿಸಬೇಕಾದ ಸಚಿವರು | : | ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಸರ್ಕಾರದ ವೈದ್ಯಕೀಯ ಶಿಕ್ಷಣ ಕಾಲೇಜುಗಳಲ್ಲಿ ಮಂಜೂರಾದ ಒಟ್ಟು ಉಪನ್ಯಾಸಕರ ಸಂಖ್ಯೆ ಎಷ್ಟು; ಅದರಲ್ಲಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ ಎಷ್ಟು; (ಕಾಲೇಜುವಾರು ವಿವರ ನೀಡುವುದು) | ಕಾಲೇಜುವಾರು ಭೋದಕರ ವಿವರಗಳನ್ನು ಅನುಬಂಧದಲ್ಲಿ ಒದಗಿಸಿದೆ. |
| (ಆ) | ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಆಸ್ಪತ್ರೆಗಳ ಸಂಖ್ಯೆ ಎಷ್ಟು ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಇರಬೇಕಾದ ಕನಿಷ್ಠ ಮೂಲಭೂತ ಸೌಕರ್ಯಗಳಾವುವು; | ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ವೈದ್ಯಕೀಯ ಕಾಲೇಜುಗಳಿಗೆ ಹೊಂದಿಕೊಂಡಂತೆ 21 ಬೋಧಕ ಆಸ್ಪತ್ರೆಗಳು ಹಾಗೂ 9 ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿವೆ.<br><br>ಹೊಸ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಭಾರತೀಯ ವೈದ್ಯಕೀಯ ಪರಿಷತ್ತಿನ ಮಾರ್ಗಸೂಚಿಗಳನ್ವಯ ಮೆಟ್ರೋಪಾಲಿಟನ್ ನಗರಗಳಲ್ಲಿ 10 ಎಕರೆ ಜಾಗ ಹಾಗೂ ಇದನ್ನು ಹೊರತುಪಡಿಸಿದ ಜಾಗಗಳಲ್ಲಿ 25 ಎಕರೆ ಜಾಗ ಲಭ್ಯವಿರಬೇಕಾಗಿರುತ್ತದೆ. ಇನ್ನುಳಿದಂತೆ 300 ಹಾಸಿಗೆ ಸಾಮರ್ಥ್ಯದ ಕಾರ್ಯನಿರತ ಆಸ್ಪತ್ರೆಯು ಲಭ್ಯವಿರಬೇಕಾಗಿರುತ್ತದೆ. ಬೋಧಕ-ಬೋಧಕೇತರ ಸಿಬ್ಬಂದಿಗಳು, ಪ್ರಯೋಗಾಲಯ, ಗ್ರಂಥಾಲಯ, ಉಪನ್ಯಾಸ ಕೊಠಡಿಗಳು, ಪರೀಕ್ಷಾ ಕೊಠಡಿಗಳು, ಹಾಸ್ಟೆಲ್ ಕೊಠಡಿಗಳು ಮತ್ತು ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ವಸತಿ ನಿಲಯಗಳ ಸೌಲಭ್ಯಗಳನ್ನು ಒದಗಿಸಬೇಕಾಗಿರುತ್ತದೆ. |
| (ಇ) | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಎಲ್ಲಾ ರೀತಿ ಮೂಲಭೂತ ಸೌಲಭ್ಯಗಳನ್ನೊಳಗೊಂಡ ಜಿಲ್ಲಾಸ್ಪತ್ರೆ, ಮಕ್ಕಳ ಆಸ್ಪತ್ರೆ, ಹೆರಿಗೆ ಆಸ್ಪತ್ರೆಗಳಿದ್ದರೂ ಇದುವರೆಗೂ ಮಂಗಳೂರಿನಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು ಪ್ರಾರಂಭಿಸದಿರಲು ಕಾರಣವೇನು; | ಪ್ರತಿ ವೈದ್ಯಕೀಯ ಕಾಲೇಜಿನ ಸ್ಥಾಪನೆಗೆ ರೂ.610.00 ಕೋಟಿಗಳ ಅನಾವರ್ತಕ ವೆಚ್ಚ ಹಾಗೂ ರೂ.60.00 ಕೋಟಿಗಳ ಆವರ್ತಕ ವೆಚ್ಚ ಉಂಟಾಗಲಿದೆ.<br><br>ಈಗಾಗಲೇ ಹಿಂದಿನ ಆಯವ್ಯಯಗಳಲ್ಲಿ ಘೋಷಣೆಯಾಗಿರುವ ಕಾಲೇಜುಗಳ ಸ್ಥಾಪನೆಗೆ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು, |
| (ಈ) | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಯಾವಾಗ ಸರ್ಕಾರಿ ಮೆಡಿಕಲ್ ಕಾಲೇಜು | |

| | | |
|---|---|---|
| | ಪ್ರಾರಂಭಿಸಲಾಗುವುದು; ಸರ್ಕಾರಿ ಮೆಡಿಕಲ್ ಕಾಲೇಜು ಪ್ರಾರಂಭಿಸುವುದರಿಂದ ಬಡ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಅನುಕೂಲ ವಾಗುವುದರ ಕುರಿತು ಸರ್ಕಾರದ ನಿಲುವೇನು; | ಒದಗಿಸಲು ಕ್ರಮವಹಿಸಸಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸದ್ಯಕ್ಕೆ ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ. |
| (ಉ) | ಕಳೆದ 5 ವರ್ಷಗಳಲ್ಲಿ ಕನಿಷ್ಠ ಮೂಲಭೂತ ಸೌಕರ್ಯಗಳಿಲ್ಲ ಎಂಬ ಕಾರಣಕ್ಕಾಗಿ ಎಷ್ಟು ಮೆಡಿಕಲ್ ಕಾಲೇಜುಗಳಿಗೆ ವಿದ್ಯಾರ್ಥಿಗಳ ಪ್ರವೇಶಾವಕಾಶವನ್ನು ತಡೆಹಿಡಿಯಲಾಗಿದೆ; ಅವುಗಳು ಯಾವುವು? | ಕಳೆದ 05 ವರ್ಷಗಳಲ್ಲಿ ಕನಿಷ್ಠ ಮೂಲಭೂತ ಸೌಕರ್ಯಗಳಿಲ್ಲ ಎಂಬ ಕಾರಣಕ್ಕಾಗಿ ಯಾವುದೇ ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ ವಿದ್ಯಾರ್ಥಿಗಳ ಪ್ರವೇಶಾವಕಾಶವನ್ನು ಎಂಸಿಐ ತಡೆಹಿಡಿದಿರುವುದಿಲ್ಲ. |

ಸಂಖ್ಯೆ: ಆಕುಕ 593 ಎಂಪಿಎಸ್ 2018

(ಡಿ.ಕೆ.ಶಿವಕುಮಾರ್)
ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು

# ಅನುಬಂಧ-1

**ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎನ್ ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 799(922)**

| ಕ್ರ ಸಂ. | ಕಾಲೇಜುಗಳ ಹೆಸರು | ಮಂಜೂರಾದ ಒಟ್ಟು ಉಪನ್ಯಾಸಕರ ಸಂಖ್ಯೆ (ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಎಸ್‌ಆರ್‌ಓ, ಜೆಆರ್‌ಓ, ಮತ್ತು ಟ್ಯೂಟರ್ / ಲೆಕ್ಚರರ್ ಒಳಗೊಂಡಿರುತ್ತಾರೆ.) | ಅವರಲ್ಲಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ |
|---|---|---|---|
| 1 | ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು. | 638 | – |
| 2 | ಮೈಸೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಮೈಸೂರು. | 358 | 53 |
| 3 | ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ. | 333 | 24 |
| 4 | ವಿಜಯನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬಳ್ಳಾರಿ. | 344 | 43 |
| 5 | ಬೆಳಗಾಂ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾಂ. | 223 | 80 |
| 6 | ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ. | 264 | – |
| 7 | ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ. | 229 | 38 |
| 8 | ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ | 253 | 37 |
| 9 | ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು. | 235 | 84 |
| 10 | ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ. | 328 | 92 |
| 11 | ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಾಮರಾಜನಗರ | 186 | 34 |
| 12 | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಡಗು | 185 | 16 |
| 13 | ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಾರವಾರ | 178 | 25 |
| 14 | ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ | 199 | 63 |
| 15 | ಕೊಪ್ಪಳ ವೈದ್ಯಕೀಯ ವಿಜ್ಞಾನಗಳಸಂಸ್ಥೆ, ಕೊಪ್ಪಳ | 196 | 32 |
| 16 | ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗುಲ್ಬರ್ಗಾ | 226 | 106 |